# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ವಸಂತ ಹೆಚ್. ಮುಳಸಾವಳಗಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು - ಸಂಭಾವನೆ ನೀಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂ. ಸಿಆಸುಇ 6 ಸೇಇವಿ 2010, ದಿನಾಂಕ. 20-04-2011.
2. ಸರ್ಕಾರದ ಆದೇಶ ಸಂ. ಗ್ರಾಅಪ 16 ಇಎನ್‌ಕ್ಯೂ 2009 ದಿನಾಂಕ. 14-10-2011.
3. ವಿಚಾರಣಾಧಿಕಾರಿಯವರ ವರದಿ ದಿನಾಂಕ. 25-10-2013

ಪ್ರಸ್ತಾವನೆ:

ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 15,000-00 ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ. 20-04-2011ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಶ್ರೀ ವಿ.ಕಲ್ಲಪ್ಪ, ಕಾರ್ಯಪಾಲಕ ಇಂಜಿನಿಯರ್ ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಡಗಲಿ ಇಲ್ಲಿ ಕರ್ತವ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಹಣ ದುರುಪಯೋಗ, ಕರ್ತವ್ಯಲೋಪ ಹಾಗೂ ಅಧಿಕಾರ ದುರುಪಯೋಗಪಡಿಸಿಕೊಂಡಿದ್ದಾರೆಂಬ ಆರೋಪಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಶ್ರೀ ವಸಂತ ಹೆಚ್. ಮುಳಸಾವಳಗಿ, ನಿವೃತ್ತ ಜಿಲ್ಲಾ ನ್ಯಾಯಾಧೀಶವರನ್ನು ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ. 14-10-2011ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ದಿನಾಂಕ. 25-10-2013 ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ, ವಿಚಾರಣಾಧಿಕಾರಿಗೆ ಸಂಭಾವನೆ ಮಂಜೂರು ಮಾಡಲು ಮುಂದಿನಂತೆ ಆದೇಶಿಸಿದೆ.

ಆದೇಶ ಸಂಖ್ಯೆ ಗ್ರಾಅಪ 16 ಇಎನ್‌ಕ್ಯೂ 2013 ಬೆಂಗಳೂರು, ದಿನಾಂಕ 19-11-2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ವಸಂತ ಹೆಚ್. ಮುಳಸಾವಳಗಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರು ಸರ್ಕಾರವು ಆದೇಶದಂತೆ ವಿಚಾರಣೆ ಜರುಗಿಸಿ ವರದಿ ಸಲ್ಲಿಸಿರುತ್ತಾರೆ. ವಿಚಾರಣಾಧಿಕಾರಿಗಳಿಗೆ ನಿಗದಿಪಡಿಸಿರುವ ರೂ. 15,000-00 (ವಾಹನ ಭತ್ಯೆಯೂ ಸೇರಿದಂತೆ) ಗಳನ್ನು ಪಾವತಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರಿಗೆ ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, (ಆಡಿಟ್ ಮತ್ತು ಅಕೌಂಟ್ಸ್), ಬೆಂಗಳೂರು.

ಮು.ತಿ.ನೋ.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ - ಸದರಿ ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್‌ನ್ನು ಬರೆದು ಅವರ ವಿಳಾಸಕ್ಕೆ ನೊಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.

3. ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯತ್, ಬಳ್ಳಾರಿ.

4. ಶ್ರೀ ವಸಂತ್ ಹೆಚ್. ಮುಳಸಾವಳಗಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, (ಹಿರಿಯ ವಿಭಾಗ) ವಸಂತ ವಿಹಾರ್, ಎಂ.ಐ.ಜಿ. 589, 20ನೇ ಮುಖ್ಯ ರಸ್ತೆ,10ನೇ ಬಿ ಕ್ರಾಸ್,

5. ಸೂರ್ಯನಗರ 1ನೇ ಫೇಸ್, ಹೊಸೂರು ರಸ್ತೆ, ಬೆಂಗಳೂರು

6. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಡಗಲಿ.

7. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ, ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.

8. ಹೆಚ್ಚುವರಿ ಪ್ರತಿ:ರಕ್ಷಾ ಕಡತ: ಕಂಪ್ಯೂಟರ್ ಶಾಖೆ.